**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀ ಮಂಜುನಾಥ ಬಿಳಿಯ ನಾಯ್ಕ, ಸದಸ್ಯರು, ಇಂಡಗುಂಜಿ ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು – ಆದೇಶ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 1135 ಗ್ರಾಪಂಅ 2018, ದಿನಾಂಕ: 02.02.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಜಿಲ್ಲೆ ರವರು ಪತ್ರ ಸಂಖ್ಯೆ:ಜಿಪಂಅ/ಗ್ರಾಪಂಅ/ಸದಸ್ಯ/ವಿವ–62/18–19/2427, ದಿನಾಂಕ:11.03.2019.
3. ಪ್ರಾದೇಶಿಕರ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರ ಪತ್ರ ಸಂಖ್ಯೆ: ಪ್ರಾಆಬೆ/ಜಿಪಂ/43(ಎ):ಸಿಆರ್–15/2018–19, ದಿನಾಂಕ:16.12.2019.

**ಪ್ರಸ್ತಾವನೆ:**

ಶ್ರೀ ಮಂಜುನಾಥ ಬಿಳಿಯ ನಾಯ್ಕ, ಸದಸ್ಯರು, ಇಂಡಗುಂಜಿ ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರು ಇಂಡಗುಂಜಿ ಗ್ರಾಮ ಪಂಚಾಯಿತಿಯಲ್ಲಿ ಮಾಡಿರುವ ಅವ್ಯವಹಾರಗಳ ಬಗ್ಗೆ ಉಲ್ಲೇಖ (1) ರ ಆದೇಶಗಳ ಸೂಚನೆಯಂತೆ ವಿಚಾರಣೆ ನಡೆಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಜಿಲ್ಲೆ ರವರಿಗೆ ನಿರ್ದೇಶನ ನೀಡಲಾಗಿತ್ತು. ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಜಿಲ್ಲೆ ರವರು ಆರೋಪಿತ ಸದಸ್ಯರ ವಿರುದ್ಧ ಇದಂತಹ ಆರೋಪಗಳ ಬಗ್ಗೆ ವಿಚಾರಣೆ ಮಾಡಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವಂತೆ ಮೇಲೆ ಓದಲಾದ (2) ರ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಹಾಗೂ ವಿಚಾರಣಾಧಿಕಾರಿಗಳು ಇವರು ವಿಚಾರಣಾ ವರದಿಯಲ್ಲಿ ಶ್ರೀ **ಮಂಜುನಾಥ ಬಿಳಿಯ ನಾಯ್ಕ,** ರವರು ವಿರುದ್ಧದ ಆರೋಪಗಳ ಬಗ್ಗೆ ವಿಚಾರಣೆ ನಡೆಸಲು ದಿನಾಂಕ:07.09.2019 ಮತ್ತು 05.10.2019 ರಂದು ವಿಚಾರಣೆ ನಿಗಧಿಪಡಿಸಲಾಗಿತ್ತು. ತದನಂತರ ವಿಚಾರಣೆಯನ್ನು ದಿನಾಂಕ:22.11.2019 ರಂದು ನಡೆಸಲಾಗಿದ್ದು, ವಿಚಾರಣೆ ಸಮಯದಲ್ಲಿ ವಾದಿ ಮತ್ತು ಪ್ರತಿವಾದಿಗಳ ವಾದ ವಿವಾದಗಳನ್ನು ಆಲಿಸಿ ಅವರು ಸಲ್ಲಿಸಿರುವ ಲಿಖಿತ ಹೇಳಿಕೆಯನ್ನು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಉತ್ತರ ಕನ್ನಡ ಜಿಲ್ಲೆ, ಹೊನ್ನಾವರ ತಾಲ್ಲೂಕಿನ ಇಂಡಗುಂಜಿ ಗ್ರಾಮ ಪಂಚಾಯಿತಿಯ ಸದಸ್ಯರಾದ ಶ್ರೀ ಮಂಜುನಾಥ ಬಿಳಿಯ ನಾಯ್ಕ, ರವರು ಅವರ ಮಗನಾದ ಶ್ರೀ ಜಗದೀಶ್ ನಾಯ್ಕ, ರವರು 4ನೇ ದರ್ಜೆ ಗುತ್ತಿಗೆದಾರರಾಗಿದ್ದು, ಸದರಿ ಗ್ರಾಮ ಪಂಚಾಯಿತಿಯಲ್ಲಿ 13 ಮತ್ತು 14ನೇ ಹಣಕಾಸು ಯೋಜನೆಯಲ್ಲಿ 2014 ರಿಂದ ಒಟ್ಟು 43 ತುಂಡು ಗುತ್ತಿಗೆ ಕಾಮಗಾರಿಗಳನ್ನು ಪಡೆದು ಕೆಲಸ ಮಾಡಿರುವುದು ಸಾಬೀತಾಗಿರುತ್ತದೆ. ಸದಸ್ಯರ ರಕ್ತ ಸಂಬಂಧಿಯಾದ ಅವರ ಮಗನು ಪಂಚಾಯಿತಿ ಕಾಮಗಾರಿಗಳಲ್ಲಿ ಪಾಲ್ಗೊಂಡಿರುವುದು ದೃಢಪಟ್ಟಿರುವುದರಿಂದ ಸದಸ್ಯರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಕಲಂ 43(ಎ) ರನ್ವಯ ಕ್ರಮಜರುಗಿಸಲು ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ರವರು ಶಿಫಾರಸ್ಸು ಮಾಡಿರುತ್ತಾರೆ.

ಪರಿಶೀಲಿಸಲಾಗಿ, ಶ್ರೀ ಮಂಜುನಾಥ ಬಿಳಿಯ ನಾಯ್ಕ, ಸದಸ್ಯರು, ರವರು ತಮ್ಮ ಅಧಿಕಾರ ದುರುಪಯೋಗ ಪಡಿಸಿಕೊಂಡು ತಮ್ಮ ಮಗನಿಗೆ ಗ್ರಾಮ ಪಂಚಾಯಿತಿ ವತಿಯಿಂದ 43 ತುಂಡು ಗುತ್ತಿಗೆ ಕಾಮಗಾರಿಗಳನ್ನು ನೀಡಲು ಕಾರಣರಾಗಿರುವುದರಿಂದ ಪ್ರಾದೇಶಿಕ ಆಯುಕ್ತರ, ಬೆಳಗಾವಿ ವಿಭಾಗ,

...2

ಬೆಳಗಾವಿ ರವರು ಶಿಫಾರಸ್ಸಿನಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಕಲಂ 43(ಎ)(5) ರನ್ವಯ ಕ್ರಮಜರುಗಿಸಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/160/ಗ್ರಾಪಂಅ/2020**
**ಬೆಂಗಳೂರು, ದಿನಾಂಕ:07-03-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮಂಜುನಾಥ ಬಿಳಿಯ ನಾಯ್ಕ, ಸದಸ್ಯರು, ಇಂಡಗುಂಜಿ ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ ರವರ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(5) ರನ್ವಯ ಸದರಿ ಗ್ರಾಮ ಪಂಚಾಯತ್‌ನ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 07/03/2020.
(ನವೀನ್‌ಕುಮಾರ್ ಬಿ.)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

7.3.020

**ಗೆ:**

1) ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಉತ್ತರ ಕನ್ನಡ ಜಿಲ್ಲೆ.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹೊನ್ನಾವರ, ಉತ್ತರ ಕನ್ನಡ ಜಿಲ್ಲೆ.
4) ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇಂಡಗುಂಜಿ ಗ್ರಾಮ ಪಂಚಾಯಿತಿ, ಹೊನ್ನಾವರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.
5) ಸಂಬಂಧಿಸಿದವರಿಗೆ (ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹೊನ್ನಾವರ, ಉತ್ತರ ಕನ್ನಡ ಜಿಲ್ಲೆ ರವರ ಮುಖಾಂತರ)
6) ಗಣಕ ಕೋಶ.
7) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.